ಅ) ಕಳೆದ 4 ವರ್ಷಗಳಲ್ಲಿ ಸುರತ್ಕಲ್ ಕ್ಷೇತ್ರದಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಮಂಜೂರಾದ ನೂತನ ಕೊಠಡಿಗಳ ಮತ್ತು ಶೌಚಾಲಯಗಳ ಸಂಖ್ಯೆ ಎಷ್ಟು? (ವರ್ಷವಾರು ಮಾಹಿತಿ ಒದಗಿಸುವುದು)

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :—

ಅ) ವರ್ಷ	ಸರ್ಕಾರಿ ಪ್ರಾಥಮಿಕ ಶಾಲೆಗಳು		ಸರ್ಕಾರಿ ಪ್ರೌಢಶಾಲೆಗಳು	
	ಮಂಜೂರಾದ ನೂತನ ಕೊಠಡಿಗಳ ಸಂಖ್ಯೆ	ಮಂಜೂರಾದ ಶೌಚಾಲಯಗಳ ಸಂಖ್ಯೆ	ಮಂಜೂರಾದ ನೂತನ ಕೊಠಡಿಗಳ ಸಂಖ್ಯೆ	ಮಂಜೂರಾದ ಶೌಚಾಲಯಗಳ ಸಂಖ್ಯೆ
1995-96	02	—	02	—
1996-97	11	—	05	01
1997-98	25	—	05	—
1998-99	04	—	—	—
	42	—	12	01

ಆ) ಸುರತ್ಕಲ್ ಕ್ಷೇತ್ರದಲ್ಲಿ 20 ಸರ್ಕಾರಿ ಪ್ರಾಥಮಿಕ ಶಾಲೆಗಳು ಹಾಗೂ 3 ಸರ್ಕಾರಿ ಪ್ರೌಢ ಶಾಲೆಗಳನ್ನು ಹೊರತುಪಡಿಸಿ ಉಳಿದೆಲ್ಲಾ ಶಾಲೆಗಳಿಗೆ ಶೌಚಾಲಯ ವ್ಯವಸ್ಥೆ ಕಲ್ಪಿಸಲಾಗಿದೆ.

ಇ) ಪ್ರತಿ ವರ್ಷವೂ ಹಂತ ಹಂತವಾಗಿ ಪ್ರತಿ ಶಾಲೆಗೂ ಶೌಚಾಲಯ ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಸರ್ಕಾರಿ ಪ್ರೌಢಶಾಲೆಯಲ್ಲಿರುವ ಖಾಲಿ ಅಧ್ಯಾಪಕರ ಹುದ್ದೆಗಳ ಬಗ್ಗೆ.

34(210) ಶ್ರೀ ಕುಂಭೆ ಸುಂದರರಾವ್ (ಸುರತ್ಕಲ್) :— ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ದಕ್ಷಿಣ ಕನ್ನಡ ಜಿಲ್ಲೆಯ ಸರ್ಕಾರಿ ಪ್ರೌಢಶಾಲೆಯಲ್ಲಿ ಖಾಲಿ ಇರುವ ಅಧ್ಯಾಪಕರುಗಳ ಹುದ್ದೆಗಳೆಷ್ಟು?

ಆ) ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :—

ಪ್ರ 82

ಅ) 1997-98ನೇ ಸಾಲಿನ ವಿಭಾಗೀಯ ನೇಮಕಾತಿಯಲ್ಲಿ ಹೆಚ್ಚುವರಿ ಪಟ್ಟಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳಿಂದ ಕೌನ್ಸಿಲಿಂಗ್ ವಿಧಾನದಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಕುಣಿಗಲ್ ತಾಲ್ಲೂಕಿನ ಗುನ್ನಾಗೆರೆಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ.

35(148) ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) :— ಮಾನ್ಯ ಆರೋಗ್ಯ ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ತುಮಕೂರು ಜಿಲ್ಲೆಯ ಕುಣಿಗಲ್ ತಾಲ್ಲೂಕಿನ ಗುನ್ನಾಗೆರೆಯಲ್ಲಿ ಪ್ರಾ. ಆ.ಕೇಂದ್ರ ತೆರೆಯುವ ಅವಶ್ಯಕತೆ ಇದೆ ಎನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದಲ್ಲಿ, ಅದನ್ನು ಎಂದಿನಿಂದ ತೆರೆಯಲಾಗುವುದು.

ಡಾ: ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಬಂದಿದೆ.

ಆ) ರಾಜ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮಂಜೂರು ಮಾಡುವ ಬಗ್ಗೆ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಸ್ವಸ್ತಿ ಯೋಜನೆ ರಾಜ್ಯದಲ್ಲಿ ಅನುಷ್ಠಾನಗೊಳ್ಳುತ್ತಿರುವ ಬಗ್ಗೆ.

36(149) ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) :— ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಸ್ವಸ್ತಿ ಯೋಜನೆ ರಾಜ್ಯದಲ್ಲಿ ಅನುಷ್ಠಾನಗೊಳ್ಳುತ್ತಿದೆಯೇ?

ಆ) ಹಾಗಿದ್ದಲ್ಲಿ, ಇದುವರೆಗೆ ಆಗಿರುವ ಪ್ರಗತಿ ಎಷ್ಟು?

ಇ) ತುಮಕೂರು ಜಿಲ್ಲೆಯಲ್ಲಿ ಈ ಯೋಜನೆಯ ಅಡಿಯಲ್ಲಿ ಆಗಿರುವ ಪ್ರಗತಿ ಎಷ್ಟು?